ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ,
ಚಿಕ್ಕಮಗಳೂರು – 577101, ಚಿಕ್ಕಮಗಳೂರು ಜಿಲ್ಲೆ, ಕರ್ನಾಟಕ.
OFFICE OF THE DEPUTY COMMISSIONER AND DISTRICT MAGISTRATE,
Chikkamagaluru – 577101, Chikkamagaluru District, Karnataka.

Tel. 08262-230401(O), 230402(R), 231499(ADC), 235262(Rev-Sec), Email: deo.cmagalur@gmail.com/dcckmlr@gmail.com

**ಸಂ: DCCKM-MUZ0DVS2(BUD)/ /2025-MUZ-DC CKM** **Date :13.10.2025**

## ಸಲಹಾ ಟಿಪ್ಪಣಿ (Advisory Note)

ಚಿಕ್ಕಮಗಳೂರು ತಾಲ್ಲೂಕು, ಬಿಂಡಿಗಾ ಶ್ರೀ ದೇವೀರಮ್ಮ ದೇವಾಲಯದ ವಾರ್ಷಿಕ ಜಾತ್ರಾ ಮಹೋತ್ಸವ ಕಾರ್ಯಕ್ರಮವು **ದಿನಾಂಕ:19/10/2025 ರಿಂದ ದಿನಾಂಕ:23/10/2025** ರವರೆಗೆ ನಡೆಯಲಿದ್ದು, ಸದರಿ ಕಾರ್ಯಕ್ರಮಕ್ಕೆ ಈ ಜಿಲ್ಲೆ ಹಾಗು ಹೊರ ಜಿಲ್ಲೆಗಳಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತಾಧಿಗಳು ವಾಹನಗಳ ಮುಖಾಂತರ ಆಗಮಿಸುವುದರಿಂದ ದೇವಾಲಯಕ್ಕೆ ತೆರಳುವ ರಸ್ತೆಯು ಕಿರಿದಾಗಿದ್ದು ವಾಹನ ದಟ್ಟಣೆ, ಹಾಗೂ ಹೆಚ್ಚಿನ ಜನಸಂದಣಿಯಾಗಿ ಅನಾನುಕೂಲವಾಗುವ ಸಂಭವವಿರುತ್ತದೆ. ಈ ಹಿನ್ನಲೆಯಲ್ಲಿ

01. ದಿನಾಂಕ:19/10/2025 ಮತ್ತು ದಿ:23/10/2025 ರವರಗೆ ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಳೆ ಬರುವ ಕುರಿತು ಹವಾಮಾನ ಇಲಾಖೆಯು ಮುನ್ಸೂಚನೆ ನೀಡಿದ್ದು, ಈ ಹಿನ್ನೆಲೆಯಲ್ಲಿ ಬಿಂಡಿಗಾ ಮಲ್ಲೇನಹಳ್ಳಿ ಶ್ರೀ ದೇವಿರಮ್ಮ ದರ್ಶನಕ್ಕೆ ದಿನಾಂಕ: 19/10/2025 ಮತ್ತು ದಿನಾಂಕ:20/10/2025 ರಂದು ಬೆಟ್ಟ ಏರುವವರು 15 ವರ್ಷ ಮೇಲ್ಪಟಿರ ಬೇಕು ಮತ್ತು 60 ವರ್ಷದೊಳಗಿರಬೇಕಾಗಿರುತ್ತದೆ.
02. ದಿನಾಂಕ:19/10/2025 ರಿಂದ ದಿನಾಂಕ:23/10/2025 ರ ವರೆಗೆ ಜಾತ್ರಾ ಮಹೋತ್ಸ ವಕ್ಕೆ ತರೀಕೆರೆಯಿಂದ ವಾಹನಗಳಲ್ಲಿ ಆಗಮಿಸುವ ಭಕ್ತರು/ ಸ್ಥಳೀಯರು ಮಾತ್ರ ಲಿಂಗದಹಳ್ಳಿ ಮಾರ್ಗವಾಗಿ ಬಿಂಡಿಗಾ ಗ್ರಾಮಕ್ಕೆ ಬರುವುದು ಹಾಗೂ ತರೀಕೆರೆಯಿಂದ ಅನ್ಯಕಾರ್ಯ ನಿಮಿತ್ತ ಚಿಕ್ಕಮಗಳೂರಿಗೆ ಬರುವ ಇತರೆ ಎಲ್ಲಾ ವಾಹನಗಳು ದಿನಾಂಕ:19/10/2025 ರ ಬೆಳ್ಳಗೆ:6.00 ಗಂಟೆಯಿಂದ ದಿ:20/10/2025 ರ ಮಧ್ಯಾಹ್ನ: 2.00 ಗಂಟೆಯವರೆಗೆ ಕಡ್ಡಾಯವಾಗಿ ಕಡೂರು ಮಾರ್ಗವಾಗಿ ಬರುವುದು.
03. ತರೀಕೆರೆ-ಲಿಂಗದಳ್ಳಿ-ಸಂತವೇರಿ ಮಾರ್ಗವಾಗಿ ಬರುವವರು ತಮ್ಮ ವಾಹನಗಳನ್ನು ಕುಮಾರ ಗಿರಿಯಲ್ಲಿ ಪಾರ್ಕಿಂಗ್ ಮಾಡುವುದು. ಚಿಕ್ಕಮಗಳೂರು-ಕೈಮರ ಮಾರ್ಗವಾಗಿ ಬಿಂಡಿಗ ಮಲ್ಲೇನಹಳ್ಳಿಗೆ ಬರುವ ಸಾರ್ವಜನಿಕರು ಕಡ್ಡಾಯವಾಗಿ ತಮ್ಮ ವಾಹನಗಳನ್ನು ನಿಗಧಿ ಪಡಿಸಿರುವ ಮಲ್ಲೇನಹಳ್ಳಿ ಸರ್ಕಾರಿ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜ್ ಆವರಣದಲ್ಲಿ ಪಾರ್ಕಿಂಗ್ ಮಾಡುವುದು. ಹಾಗೂ ಯಾವುದೇ ಕಾರಣಕ್ಕೂ ರಸ್ತೆಯ ಬದಿಯಲ್ಲಿ ವಾಹನಗಳನ್ನು ಪಾರ್ಕಿಂಗ್ ಮಾಡಕೂಡದು.
04. ದಿನಾಂಕ:19/10/2025 ರಿಂದ ದಿ:23/10/2025 ರವರೆಗೆ ಮಲ್ಲೇನಹಳ್ಳಿ ಸರ್ಕಾರಿ ಪ್ರೌಢ ಶಾಲೆಯ ಗೇಟ್‌ನಿಂದ ಕುಮಾರಗಿರಿ ಅರ್ಚ್‌ವರೆಗೆ ರಸ್ತೆಯ ಎರಡೂ ಬದಿಯಲ್ಲಿ ಯಾವುದೇ ರೀತಿಯ ವಾಹನಗಳನ್ನು ನಿಲುಗಡೆ ಮಾಡಬಾರದು.
05. ಚಿಕ್ಕಮಗಳೂರಿನಿಂದ ಬಿಂಡಿಗಾ ಶ್ರೀ ದೇವಿರಮ್ಮ ದೇವಸ್ಥಾನಕ್ಕೆ ತೆರಳುವ ಭಕ್ತಾಧಿಗಳು ಚಿಕ್ಕಮಗಳೂರಿನ ಐ.ಜಿ-ರಸ್ತೆ, ಎಮ್.ಜಿ-ರಸ್ತೆ, ಡಿ.ಎ.ಸಿ.ಜಿ ಪಾಲಿಟೆಕ್ನಿಕ್ ಗ್ರೌಂಡಗಳಲ್ಲಿ ವ್ಯವಸ್ಥಿತ ರೀತಿಯಲ್ಲಿ ತಮ್ಮ ವಾಹನಗಳನ್ನು ನಿಲುಗಡೆ ಮಾಡಿ ಸಾರ್ವಜನಿಕ ಸಾರಿಗೆಯ ಬಸ್ಸುಗಳಲ್ಲಿ ಬಿಂಡಿಗಾ ಗ್ರಾಮಕ್ಕೆ ಪ್ರಯಾಣಿಸಿ ಸಹಕರಿಸುವುದು.
06. ಮುಳ್ಳಯ್ಯನಗಿರಿ, ಶ್ರೀ ಗುರು ದತ್ತಾತ್ರೇಯ ಬಾಬಾಬುಡನ್ ಸ್ವಾಮಿ ದರ್ಗಾ ಸಂಸ್ಥೆ, ಗಾಳಿಕೆರೆ, ಹಾಗೂ ಮಾಣಿಕ್ಯಧಾರಾ ಸ್ಥಳಗಳಲ್ಲಿ ಸತತವಾಗಿ ಮಳೆಯಾಗುತ್ತಿರು

ವುದರಿಂದ ಹಾಗೂ ಜಾತ್ರೆಯಿಂದ ಉಂಟಾಗುವ ಜನಸಂದಣಿ ಹಿನ್ನಲೆಯಲ್ಲಿ ದಿನಾಂಕ: 19/10/2025 ರ ಬೆಳಗ್ಗೆ 6.00 ಘಂಟೆಯಿಂದ ದಿನಾಂಕ:20/10/2025 ರ ಸಂಜೆ 6.00 ಘಂಟೆಯವರೆಗೆ ಸೀತಾಳಯ್ಯನಗಿರಿ, ಮುಳ್ಳಯ್ಯನಗಿರಿ, ಶ್ರೀ ಗುರು ದತ್ತಾತ್ರೇಯ ಬಾಬಾ ಬುಡನ್ ಸ್ವಾಮಿ ದರ್ಗಾ ಸಂಸ್ಥೆ, ಗಾಳಿಕೆರೆ ಹಾಗೂ ಮಾಣಿಕ್ಯಾಧಾರಾಕ್ಕೆ ಪ್ರವಾಸಿಗರು ತೆರಳದಂತೆ ಈ ಮೂಲಕ ಜಿಲ್ಲಾಡಳಿತ ವತಿಯಿಂದ ಕೋರಲಾಗಿದೆ.

07. ಹೋಮ್ ಸ್ಟೇಗಳು, ರೆಸಾರ್ಟ್‌ಗಳು ಮತ್ತು ವಸತಿ ಗೃಹಗಳಲ್ಲಿ ಈಗಾಗಲೇ ಮುಂಗಡವಾಗಿ ಕೊಠಡಿಗಳನ್ನು ಕಾಯ್ದಿರಿಸಿರುವ ಪ್ರವಾಸಿಗರಿಗೆ ಯಾವುದೇ ನಿರ್ಭಂದವಿರುವುದಿಲ್ಲ.

ಮೇಲ್ಕಂಡ ಸಲಹೆಗಳನ್ನು ಅನುಸರಿಸುವ ಮೂಲಕ ಭಕ್ತರು/ಸಾರ್ವಜನಿಕರು/ಪ್ರವಾಸಿಗರು ಜಿಲ್ಲಾಡಳಿತಕ್ಕೆ ಸಹಕರಿಸಲು ಕೋರಿದೆ.

ಜಿಲ್ಲಾಧಿಕಾರಿ
ಚಿಕ್ಕಮಗಳೂರು ಜಿಲ್ಲೆ
ಚಿಕ್ಕಮಗಳೂರು

**ಪ್ರತಿಯನು:** ಹಿರಿಯ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಚಿಕ್ಕಮಗಳೂರು ಇವರಿಗೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಎಲ್ಲಾ ದಿನ ಪತ್ರಿಕೆಗಳಲ್ಲಿ ಉಚ್ಚಿತವಾಗಿ ಸುದ್ದಿ ತುಣಕಾಗಿ ಪ್ರಕಟಿಸಲು ಕಳುಹಿಸಿದೆ.